# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಮುಖ್ಯ ಆಯುಕ್ತರು ರವರ ಕಛೇರಿ, ಎನ್.ಆರ್.ಚೌಕ, ಬೆಂಗಳೂರು – 560 002.


ಸಂಖ್ಯೆ: ಮು.ಆ/ಪಿ.ಆರ್/ (ಓ)2964 /2024–25

ದಿನಾಂಕ: 9|1|2025.

**ರವರಿಗೆ,**

ಅಧ್ಯಕ್ಷರು,
ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ,
ಕಾವೇರಿ ಭವನ, ಕೆಂಪೇಗೌಡ ರಸ್ತೆ,
ಬೆಂಗಳೂರು–560009.

ಮಾನ್ಯರೇ,

**ಉಲ್ಲೇಖ:** ಘನ ಸರ್ವೋಚ್ಚ ನ್ಯಾಯಾಲಯವು ಸಿವಿಲ್ ಅಪೀಲ್ ಸಂಖ್ಯೆ:14604/2024 SLP (C) ಸಂಖ್ಯೆ:36440/2024 ರಲ್ಲಿ ದಿನಾಂಕ: 17.12.2024 ರಂದು ನೀಡಿರುವ ಆದೇಶ

* * * * * *

ಪಾಲಿಕೆ ವ್ಯಾಪ್ತಿಯಲ್ಲಿ ಕಟ್ಟಡ ನಿರ್ಮಾಣ ಕೈಗೊಳ್ಳುವ ಪೂರ್ವದಲ್ಲಿ ಪಾಲಿಕೆಯಿಂದ ನಕ್ಷೆ ಮಂಜೂರಾತಿ ಮತ್ತು ಪರವಾನಗಿ ಪಡೆಯುವುದು ಕಡ್ಡಾಯವಾಗಿರುತ್ತದೆ. ಪಾಲಿಕೆಯಿಂದ ಮಂಜೂರಾತಿ ಪಡೆಯದೆ ಅನಧಿಕೃತವಾಗಿ ಕಟ್ಟಡ ನಿರ್ಮಾಣ ಕೈಗೊಂಡಲ್ಲಿ ಅಂತಹ ನಿರ್ಮಾಣಗಳನ್ನು ತಡೆಗಟ್ಟಲು ಹಾಗೂ ಮಂಜೂರಾತಿ ನಕ್ಷೆ ಉಲ್ಲಂಘಿಸಿ ನಿರ್ಮಿಸುವ ಕಟ್ಟಡಗಳ ವಿರುದ್ಧ ಬಿಬಿಎಂಪಿ ಕಾಯ್ದೆ–2020ರ ಅವಕಾಶಗಳಂತೆ ಪಾಲಿಕೆಯಿಂದ ಕ್ರಮಜರುಗಿಸಲಾಗುತ್ತಿದೆ. ಉಲ್ಲೇಖಿತ ಘನ ಸರ್ವೋಚ್ಚ ನ್ಯಾಯಾಲಯದ ಆದೇಶದಲ್ಲಿ ಮಂಜೂರಾತಿ ನಕ್ಷೆ ಉಲ್ಲಂಘಿಸಿ ನಿರ್ಮಿಸುವ ಕಟ್ಟಡಗಳು ಹಾಗೂ ಅನಧಿಕೃತವಾಗಿ ನಿರ್ಮಿಸುವ ಕಟ್ಟಡಗಳನ್ನು ತಡೆಯಲು ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ಆದೇಶಿಸಲಾಗಿರುತ್ತದೆ. ಘನ ಸರ್ವೋಚ್ಚ ನ್ಯಾಯಾಲಯದ ಆದೇಶದ ಕ್ರಮ ಸಂಖ್ಯೆ: 21ರ (iv)ರಲ್ಲಿ ಈ ಕೆಳಕಂಡಂತೆ ಆದೇಶಿಸಲಾಗಿರುತ್ತದೆ.

> **"All the necessary service connections, such as, Electricity, water supply, sewerage connection, etc., shall be given by the service provider / Board to the buildings only after the production of the completion/occupation certificate".**

ಮೇಲ್ಕಂಡಂತೆ ಘನ ಸರ್ವೋಚ್ಚ ನ್ಯಾಯಾಲಯದ ಆದೇಶದ ಅನುಸಾರ ಪಾಲಿಕೆ ವ್ಯಾಪ್ತಿಯಲ್ಲಿನ ಕಟ್ಟಡಗಳಿಗೆ ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯಿಂದ ನೀರು ಸರಬರಾಜು/ಒಳಚರಂಡಿ ಸಂಪರ್ಕ ನೀಡುವ ಪೂರ್ವದಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಿಂದ ಸ್ವಾಧೀನಾನುಭವ ಪ್ರಮಾಣ ಪತ್ರವನ್ನು ಪಡೆದಿರುವ ಕಟ್ಟಡಗಳಿಗೆ ಮಾತ್ರ ನೀರು ಸರಬರಾಜು/ಒಳಚರಂಡಿ ಸಂಪರ್ಕವನ್ನು ನೀಡಲು ಕ್ರಮವಹಿಸಬೇಕಾಗಿರುತ್ತದೆ.

ಮುಂದುವರೆದು, ಘನ ಸರ್ವೋಚ್ಚ ನ್ಯಾಯಾಲಯದ ಆದೇಶದ ಕಂಡಿಕೆ 21 (viii) ರಲ್ಲಿ ಈ ಕೆಳಕಂಡಂತೆ ಆದೇಶಿಸಲಾಗಿದೆ.



**ಮುಖ್ಯ ಆಯುಕ್ತರು**
**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**

**(viii) Whenever any request is made by the respective authority under the planning department/local body for co-operation from another department to take action against any unauthorized construction, the later shall render immediate assistance and co-operation and any delay or dereliction would be viewed seriously. The States/UT must also take disciplinary action against the erring officials once it is brought to their knowledge**

ಪಾಲಿಕೆ ವ್ಯಾಪ್ತಿಯಲ್ಲಿ ಮಂಜೂರಾತಿ ನಕ್ಷೆಯಂತೆ ಕಟ್ಟಡಗಳು ನಿರ್ಮಾಣವಾಗುತ್ತಿರುವ ಬಗ್ಗೆ ನಿಗಾವಹಿಸಿ ಅಂತಹ ಕಟ್ಟಡಗಳ ತಪಾಸಣೆ ನಡೆಸಲು ಕಾರ್ಯವ್ಯಾಪ್ತಿಯ ನಗರ ಯೋಜಕರು ಮತ್ತು ಸಹಾಯಕ ನಿರ್ದೇಶಕರು ಸಕ್ಷಮ ಅಧಿಕಾರಿಗಳಾಗಿರುತ್ತಾರೆ. ಅದೇ ರೀತಿ ಅನಧಿಕೃತ ಕಟ್ಟಡ ನಿರ್ಮಾಣಗಳ ತಪಾಸಣೆ ಮಾಡಿ ಕ್ರಮ ಜರುಗಿಸಲು ಉಪವಿಭಾಗದ ಸಹಾಯಕ ಅಭಿಯಂತರರು ಮತ್ತು ಸಹಾಯಕ ಕಾರ್ಯಪಾಲಕ ಅಭಿಯಂತರರು ಸಕ್ಷಮ ಅಧಿಕಾರಿಗಳಾಗಿರುತ್ತಾರೆ ಹಾಗೂ ಅನಧಿಕೃತ ಕಟ್ಟಡ ನಿರ್ಮಾಣಗಳ ವಿರುದ್ಧ ಬಿಬಿಎಂಪಿ ಕಾಯ್ದೆ 2020ರ ಕಲಂ 248 (1), (2) & (3) ಮತ್ತು 356(1) & (2) ರಡಿಯಲ್ಲಿ ಆದೇಶಗಳನ್ನು ವಲಯ ಆಯುಕ್ತರು ಹೊರಡಿಸುತ್ತಾರೆ.

ಪಾಲಿಕೆಯಿಂದ ಈಗಾಗಲೇ ಅನಧಿಕೃತ ಕಟ್ಟಡ/ಉಲ್ಲಂಘಿತ ಕಟ್ಟಡಗಳ ವಿರುದ್ಧ ಬಿಬಿಎಂಪಿ ಕಾಯ್ದೆಯ ಕಲಂ 248(1), (2) & (3) ರಡಿಯಲ್ಲಿ ಆದೇಶ/ ನೋಟಿಸ್‌ಗಳನ್ನು ಮತ್ತು ಕಲಂ 356(1) & (2) ರಡಿಯಲ್ಲಿ ಆದೇಶ ಹೊರಡಿಸಲಾಗುತ್ತಿದೆ. ಆದುದರಿಂದ ಇನ್ನು ಮುಂದೆ ಯಾವುದೇ ಉಲ್ಲಂಘನೆ/ಅನಧಿಕೃತ ಕಟ್ಟಡದ ವಿರುದ್ಧ ಬಿಬಿಎಂಪಿ ಕಾಯ್ದೆ 2020ರ ಕಲಂ 248(3) ಅಡಿಯಲ್ಲಿ ಪಾಲಿಕೆಯಿಂದ ಆದೇಶ ಹೊರಡಿಸಿದ ತಕ್ಷಣ, ಮಂಡಳಿಯಿಂದ ಇಂತಹ ಕಟ್ಟಡಗಳಿಗೆ ತಾತ್ಕಾಲಿಕ/ಶಾಶ್ವತ ನೀರು ಸರಬರಾಜು ಮತ್ತು ಒಳಚರಂಡಿ ಸಂಪರ್ಕವನ್ನು ಕೂಡಲೇ ಸ್ಥಗಿತಗೊಳಿಸಿ ಅನಧಿಕೃತ ನಿರ್ಮಾಣಗಳನ್ನು ಪರಿಣಾಮಕಾರಿಯಾಗಿ ತಡೆಯುವುದು ಅವಶ್ಯವಿರುತ್ತದೆ.

ಆದುದರಿಂದ ಪಾಲಿಕೆ ವ್ಯಾಪ್ತಿಯಲ್ಲಿ ಅನಧಿಕೃತ ಕಟ್ಟಡ ನಿರ್ಮಾಣ/ಮಂಜೂರಾತಿ ನಕ್ಷೆ ಉಲ್ಲಂಘನೆಗಳನ್ನು ಪರಿಣಾಮಕಾರಿಯಾಗಿ ತಡೆಯಲು ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯಿಂದ ಈ ಕೆಳಕಂಡಂತೆ ಕ್ರಮಕೈಗೊಳ್ಳಲು ತಿಳಿಸಲಾಗಿದೆ.

1) **ಕಟ್ಟಡ ನಿರ್ಮಾಣ ಹಂತದಲ್ಲಿ/ಪೂರ್ವದಲ್ಲಿ ತಾತ್ಕಾಲಿಕ ಸಂಪರ್ಕ ನೀಡಬೇಕಾದಲ್ಲಿ ಪಾಲಿಕೆಯಿಂದ ನೀಡಲಾಗಿರುವ 'ಎ' ಖಾತಾ ಹಾಗೂ ಅಂತಹ ಕಟ್ಟಡಗಳ ನಿರ್ಮಾಣಕ್ಕೆ ಪಾಲಿಕೆಯಿಂದ ನಕ್ಷೆ ಮಂಜೂರಾತಿ ನೀಡಿರುವುದನ್ನು ಖಾತರಿಪಡಿಸಿಕೊಳ್ಳುವುದು.**
2) **ಯಾವುದೇ ಕಟ್ಟಡಕ್ಕೆ ಬಿಬಿಎಂಪಿ ಕಾಯ್ದೆ 2020 ರ ಕಲಂ 248(3) ರಡಿಯಲ್ಲಿ ಆದೇಶ ಹೊರಡಿಸಿದ ನಂತರ ಕಟ್ಟಡಕ್ಕೆ ಶಾಶ್ವತ/ತಾತ್ಕಾಲಿಕ ನೀರು ಸರಬರಾಜು ಮತ್ತು ಒಳಚರಂಡಿ ಸಂಪರ್ಕವನ್ನು ಕಡಿತಗೊಳಿಸುವುದು.**
3) **ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಯಾವುದೇ ಕಟ್ಟಡಕ್ಕೆ ಶಾಶ್ವತ ನೀರು ಸರಬರಾಜು ಮತ್ತು ಒಳಚರಂಡಿ ಸಂಪರ್ಕ ನೀಡುವ ಪೂರ್ವದಲ್ಲಿ ಅಂತಹ ಕಟ್ಟಡಕ್ಕೆ ಪಾಲಿಕೆಯಿಂದ**

ಮುಖ್ಯ ಆಯುಕ್ತರು
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಪೂರ್ಣತಾ ಪ್ರಮಾಣ ಪತ್ರ/ಸ್ವಾಧಿನಾನುಭವ ಪ್ರಮಾಣ ಪತ್ರ ನೀಡಲಾಗಿರುವುದನ್ನು ಖಾತರಿಪಡಿಸಿಕೊಳ್ಳುವುದು.

4) ಪಾಲಿಕೆಯಿಂದ ನೀಡಿರುವ ನಕ್ಷೆ ಮಂಜೂರಾತಿಯ ಸಿಂಧುತ್ವ ಅವಧಿಯು ಮುಗಿದ ನಂತರ, ಅಂತಹ ಕಟ್ಟಡಕ್ಕೆ ತಾತ್ಕಾಲಿಕ ಸಂಪರ್ಕ ಮುಂದುವರೆಸಬೇಕಾದಲ್ಲಿ ಕಟ್ಟಡ ನಕ್ಷೆ ಮಂಜೂರಾತಿಯನ್ನು ಪಾಲಿಕೆಯಿಂದ ನವೀಕರಿಸಿರುವುದನ್ನು ದೃಡೀಕರಿಸಿಕೊಳ್ಳುವುದು.

ಪಾಲಿಕೆಯಿಂದ ನೀಡುವ ಪ್ರಮಾಣ ಪತ್ರಗಳ ನೈಜತೆಯ ಖಾತರಿಗಾಗಿ ಪಾಲಿಕೆಯಿಂದ ನೀಡಲಾದ ಅನುಮತಿ/ಮಂಜೂರಾತಿ ಬಗ್ಗೆ ತಮ್ಮಿಂದ ನೀಡುವ ಕೋರಿಕೆಯಂತೆ ಪಾಲಿಕೆಯ ಆನ್‌ಲೈನ್ ನಕ್ಷೆ ಮಂಜೂರಾತಿ ತಂತ್ರಾಂಶದಲ್ಲಿ ಪ್ರತ್ಯೇಕ Console ಒದಗಿಸಲಾಗುವುದು.

ಮುಖ್ಯ ಆಯುಕ್ತರು

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಪ್ರತಿಯನ್ನು:

1) ಮಾನ್ಯ ಆಡಳಿತಗಾರರ ಅವಗಾಹನೆಗೆ ತರಲು ಆಪ್ತಶಾಖೆಗೆ ಕಳುಹಿಸಿದೆ.
2) ವಿಶೇಷ ಆಯುಕ್ತರು (ಯೋಜನೆ)/(ಆಡಳಿತ)/(ಕಂದಾಯ) ರವರ ಮಾಹಿತಿಗಾಗಿ ಸಲ್ಲಿಸಿದೆ.
3) **ಎಲ್ಲಾ ವಲಯಗಳ ವಲಯ ಆಯುಕ್ತರು ರವರಿಗೆ ಕಳುಹಿಸುತ್ತಾ ಪತ್ರದಲ್ಲಿ ತಿಳಿಸಿರುವಂತೆ 248(3) ಆದೇಶ ಹೊರಡಿಸಿದ ತಕ್ಷಣ ಸಂಬಂಧಪಟ್ಟ ಬಿ.ಡಬ್ಲ್ಯೂ.ಎಸ್.ಎಸ್.ಬಿ.ಅಧಿಕಾರಿಕಾರಿಗಳಿಗೆ ಪತ್ರ ಬರೆದು ಸಂಪರ್ಕವನ್ನು ಕಡಿತಗೊಳಿಸುವಂತೆ ಕೋರುವುದು**
4) ಜಂಟಿ ಆಯುಕ್ತರು, ಮುಖ್ಯ ಅಭಿಯಂತರರು ಮತ್ತು ಜಂಟಿ ನಿರ್ದೇಶಕರು-ನಗರ ಯೋಜನೆ (ಪೂರ್ವ ವಲಯ/ಪಶ್ಚಿಮ ವಲಯ /ದಕ್ಷಿಣ ವಲಯ/ಮಹದೇವಪುರ ವಲಯ/ಯಲಹಂಕ ವಲಯ/ದಾಸರಹಳ್ಳಿ ವಲಯ /ರಾಜರಾಜೇಶ್ವರಿನಗರ ವಲಯ /ಬೊಮ್ಮನಹಳ್ಳಿ ವಲಯ) ರವರುಗಳ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ
5) ಕಾನೂನು ಕೋಶದ ಮುಖ್ಯಸ್ಥರು ರವರ ಮಾಹಿತಿಗಾಗಿ
6) ಪ್ರಧಾನ ಅಭಿಯಂತರರು, ಬಿಬಿಎಂಪಿ ರವರ ಮಾಹಿತಿಗಾಗಿ.
7) ಮುಖ್ಯ ನಗರ ಯೋಜಕರು, ಬಿಬಿಎಂಪಿ ರವರ ಮಾಹಿತಿಗಾಗಿ.
8) ಅಪರ ನಿರ್ದೇಶಕರು (ನಗರ ಯೋಜನೆ) ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ.
9) ಎಲ್ಲಾ ವಿಭಾಗಗಳ ಕಾರ್ಯಪಾಲಕ ಅಭಿಯಂತರರು ರವರುಗಳ ಸೂಕ್ತ ಕ್ರಮಕ್ಕಾಗಿ.
10) ಸಹಾಯಕ ನಿರ್ದೇಶಕರು (ನಗರ ಯೋಜನೆ) (ಪೂರ್ವ ವಲಯ/ಪಶ್ಚಿಮ ವಲಯ /ದಕ್ಷಿಣ ವಲಯ/ಮಹದೇವಪುರ ವಲಯ /ಯಲಹಂಕ ವಲಯ/ದಾಸರಹಳ್ಳಿ ವಲಯ /ರಾಜರಾಜೇಶ್ವರಿನಗರ ವಲಯ/ ಬೊಮ್ಮನಹಳ್ಳಿ ವಲಯ) ರವರುಗಳ ಸೂಕ್ತ ಕ್ರಮಕ್ಕಾಗಿ.
11) ಎಲ್ಲಾ ಉಪ-ವಿಭಾಗಗಳ ಸಹಾಯಕ ಕಾರ್ಯಪಾಲಕ ಅಭಿಯಂತರರು ರವರುಗಳ ಸೂಕ್ತ ಕ್ರಮಕ್ಕಾಗಿ ಕಳುಹಿಸುತ್ತಾ ಸಂಬಂಧಪಟ್ಟ ವಾರ್ಡ್‌ನ ಅಭಿಯಂತರರು ರವರುಗಳ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ ಕಳುಹಿಸಿ ಅಗತ್ಯ ನಿರ್ದೇಶನ ನೀಡುವಂತೆ ಸೂಚಿಸಿದೆ.
12) ಎಲ್ಲಾ ಉಪ-ವಿಭಾಗಗಳ ಸಹಾಯಕ ಕಾರ್ಯಪಾಲಕ ಅಭಿಯಂತರರು ರವರುಗಳ ಸೂಕ್ತ ಕ್ರಮಕ್ಕಾಗಿ ಕಳುಹಿಸುತ್ತಾ ಸಂಬಂಧಪಟ್ಟ ವಾರ್ಡ್‌ನ ಅಭಿಯಂತರರು ರವರುಗಳ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ ಕಳುಹಿಸಿ ಅಗತ್ಯ ನಿರ್ದೇಶನ ನೀಡುವಂತೆ ಸೂಚಿಸಿದೆ.